# ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ–ಓಪರೇಟಿವ್ ಸೊಸೈಟಿಗೆ ಎಸ್‌ಸಿಡಿಸಿಸಿ ಬ್ಯಾಂಕಿನಿಂದ ಜಿಲ್ಲಾ ಮಟ್ಟದ ಸಾಧನಾ ಪ್ರಶಸ್ತಿ



ರಾಜ್ಯದ ಪ್ರತಿಷ್ಠಿತ ಸಹಕಾರಿ ಸಂಘಗಳಲ್ಲೊಂದಾದ ಶ್ರೀ ರಾಮಕೃಷ್ಣ ಕ್ರೆಡಿಟ್ ಕೋ–ಓಪರೇಟಿವ್ ಸೊಸೈಟಿ ಲಿ. ಮಂಗಳೂರು 2018-19ನೇ ಸಾಲಿನ ಎಸ್‌ಸಿಡಿಸಿಸಿ ಬ್ಯಾಂಕಿನ ಸಾಧನಾ ಪ್ರಶಸ್ತಿ ಪಡೆದಿದೆ. 2018-19ನೇ ಸಾಲಿನ ವ್ಯವಹಾರದಲ್ಲಿ ಸರ್ವತೋಮುಖ ಪ್ರಗತಿಯನ್ನು ಸಾಧಿಸಿ, ಬ್ಯಾಂಕಿನೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವುದನ್ನು ಪರಿಗಣಿಸಿ, ದಿನಾಂಕ 07.09.2019ರಂದು ಜರಗಿದ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ಬ್ಯಾಂಕಿನ ಮಹಾಸಭೆಯಲ್ಲಿ ಬ್ಯಾಂಕಿನ ಅಧ್ಯಕ್ಷ ಡಾ। ಎಂ.ಎನ್. ರಾಜೇಂದ್ರ ಕುಮಾರ್ ಅವರು ಸಂಘದ ಅಧ್ಯಕ್ಷ ಕೆ. ಜೈರಾಜ್ ಬಿ. ರೈ ಮತ್ತು ಪ್ರಭಾರ ಮಹಾಪ್ರಬಂಧಕ ಗಣೇಶ್ ಜಿ.ಕೆ. ಅವರಿಗೆ ಪ್ರಶಸ್ತಿ ಪ್ರಧಾನ ಮಾಡಿದರು. ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ಕುಂಬ್ರ ದಯಾಕರ ಆಳ್ವ ಮತ್ತು ಸಂಘದ ನಿರ್ದೇಶಕರು ಹಾಗೂ ದ.ಕ.ಜಿಲ್ಲಾ ಸಹಕಾರಿ ಯೂನಿಯನ್‌ನ ಅಧ್ಯಕ್ಷರಾದ ಬೆಳ್ಳಿಪಾಡಿ ಪ್ರಸಾದ್ ಕೌಶಲ್ ಶೆಟ್ಟಿ, ದ.ಕ.ಜಿ.ಕೇ.ಸ. ಬ್ಯಾಂಕಿನ ಉಪಾಧ್ಯಕ್ಷರಾದ ವಿನಯಕುಮಾರ್ ಸೂರಿಂಜೆ, ನಿರ್ದೇಶಕರುಗಳಾದ ಭಾಸ್ಕರ್ ಎಸ್. ಕೋಟ್ಯಾನ್, ಎಂ. ವಾದಿರಾಜ್ ಶೆಟ್ಟಿ, ಬಿ., ಕೆ.ಎಸ್. ದೇವರಾಜ್, ಶಶಿಕುಮಾರ್ ರೈ ಬಿ., ಎಸ್.ಬಿ. ಜಯರಾಮ್ ರೈ, ಐ. ದೇವಿಪ್ರಸಾದ್ ಶೆಟ್ಟಿ ಬೆಳಪು, ಹರೀಶ್ಚಂದ್ರ ಕೆ., ಎಂ. ಮಹೇಶ ಹೆಗ್ಡೆ, ಬಿ.ಅಶೋಕ್ ಕುಮಾರ್ ಶೆಟ್ಟಿ, ಮೋನಪ್ಪ ಶೆಟ್ಟಿ ಎಕ್ಕಾರು, ಸದಾಶಿವ ಉಳ್ಳಾಲ್, ರಾಜೇಶ್ ರಾವ್ ಮತ್ತು ದ.ಕ. ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು ಬಿ.ಕೆ. ಸಲೀಂ ಹಾಗೂ ಉಡುಪಿ ಜಿಲ್ಲಾ ಸಹಕಾರಿ ಯೂನಿಯನ್‌ನ ಅಧ್ಯಕ್ಷ ಜಯಕರ ಶೆಟ್ಟಿ ಇಂದ್ರಾಳಿ ಉಪಸ್ಥಿತರಿದ್ದರು. ಸಂಘಕ್ಕೆ ಈ ಪ್ರಶಸ್ತಿಯು ಸತತ ಮೂರನೇ ಬಾರಿ ಲಭಿಸಿ, ಒಟ್ಟು 8 ಬಾರಿ ದೊರಕಿರುತ್ತದೆ.